ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**10.03.2025** **13.10 hrs**

**<><*<><>*><>**

ಮುಖ್ಯಾಂಶಗಳು

**೧. ಹರಿಯಾಣದ ಗುರು ಜಂಭೇಶ್ವರ್ ವಿಜ್ಞಾನ ಮತ್ತು ತಂತ್ರಜ್ಞಾನ ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ರಾಷ್ಟ್ರಪತಿ ಭಾಗಿ**

**೨. ಪ್ರಧಾನಿ ನರೇಂದ್ರ ಮೋದಿ ಎರಡು ದಿನಗಳ ಮಾರಿಷಸ್ ಭೇಟಿ ; ನಾಳೆ, ನಾಡಿದ್ದು ವಿವಿಧ ಯೋಜನೆಗಳಿಗೆ ಚಾಲನೆ**

**೩. ಸಂಸತ್ತಿನ ಉಭಯ ಸದನಗಳಲ್ಲಿ ಕಲಾಪ ಪುನರಾರಂಭ ; ವಿವಿಧ ವಿಷಯ ಕುರಿತು ಪ್ರತಿಪಕ್ಷಗಳಿಂದ ಗದ್ದಲ-ಸಭಾತ್ಯಾಗ**

**೪. ಮಹಿಳಾ ಪ್ರಿಮಿಯರ್ ಲೀಗ್ ಕ್ರಿಕೆಟ್ ; ಮುಂಬೈ ಇಂಡಿಯನ್ಸ್ -ಗುಜರಾತ್ ಜೈಂಟ್ಸ್ ತಂಡಗಳು ಮುಖಾಮುಖಿ**

**<><*<><>*><>**

ಮೂರು ದಿನಗಳ ಹರಿಯಾಣ, ಚಂಡೀಗಢ ಮತ್ತು ಪಂಜಾಬ್ ಪ್ರವಾಸದಲ್ಲಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು, ಹರಿಯಾಣ ಹಿಸಾರ್‌ನಲ್ಲಿರುವ ಗುರು ಜಂಭೇಶ್ವರ ವಿಜ್ಞಾನ ಮತ್ತು ತಂತ್ರಜ್ಞಾನ ವಿಶ್ವವಿದ್ಯಾಲಯದ ಘಟಿಕೋತ್ಸವ ಸಮಾರಂಭದಲ್ಲಿಂದು ಪಾಲ್ಗೊಂಡಿದ್ದಾರೆ. ಘಟಿಕೋತ್ಸವ ಭಾಷಣದಲ್ಲಿ ಅವರು, ಶಿಕ್ಷಣ ಹಾಗೂ ತಂತ್ರಜ್ಞಾನ ದೇಶದ ಪ್ರತಿ ಹಳ್ಳಿಗಳಿಗೇ ತಲುಪುವುದು ದೇಶದ ಅಭಿವೃದ್ಧಿಯ ಪಥದಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ ಎಂದು ಹೇಳಿದರು. ಇಂದು ಬೆಳಗ್ಗೆ ಹರಿಯಾನದ ಹಿಸಾರ್‌ಗೆ ಆಗಮಿಸಿದ ಅವರನ್ನು ಹರಿಯಾಣ ರಾಜ್ಯಪಾಲ ಬಂಧರು ದತ್ತಾತ್ರೇಯ ಬರಮಾಡಿಕೊಂಡರು. ಈ ಕಾರ್ಯಕ್ರಮದ ಬಳಿಕ ಅವರು, ಬ್ರಹ್ಮ ಕುಮಾರಿಯರ ಸುವರ್ಣ ಮಹೋತ್ಸವ ಆಚರಣೆಯ ಸಂದರ್ಭದಲ್ಲಿ 'ಸಮಗ್ರ ಯೋಗಕ್ಷೇಮಕ್ಕಾಗಿ ಆಧ್ಯಾತ್ಮಿಕ ಶಿಕ್ಷಣ' ಎಂಬ ರಾಜ್ಯಮಟ್ಟದ ಅಭಿಯಾನಕ್ಕೆ ಚಾಲನೆ ನೀಡಲಿದ್ದಾರೆ. ರಾಷ್ಟ್ರಪತಿಗಳು ನಾಳೆ ಪಂಜಾಬ್ ಕೇಂದ್ರೀಯ ವಿಶ್ವವಿದ್ಯಾಲಯ ಮತ್ತು ಬಟಿಂಡಾದ ಏಮ್ಸ್‌ನ ಘಟಿಕೋತ್ಸವ ಸಮಾರಂಭಗಳಲ್ಲಿ ಭಾಗವಹಿಸಲಿದ್ದಾರೆ. ಸಂಜೆ, ಅವರು ಮೊಹಾಲಿಯಲ್ಲಿ ಪಂಜಾಬ್ ಸರ್ಕಾರ ಆಯೋಜಿಸಿರುವ

ಸ್ವಾಗತ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ಬುಧವಾರ, ರಾಷ್ಟ್ರಪತಿಗಳು ಚಂಡೀಗಢದ ಪಂಜಾಬ್ ವಿಶ್ವವಿದ್ಯಾಲಯದ ಘಟಿಕೋತ್ಸವ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

**<><*<><>*><>**

ಪ್ರಧಾನಿ ನರೇಂದ್ರ ಮೋದಿ ನಾಳೆ ಮತ್ತು ನಾಡಿದ್ದು ಮಾರಿಷಸ್‌ಗೆ ಎರಡು ದಿನಗಳ ಭೇಟಿ ನೀಡಲಿದ್ದು, ಈ ವೇಳೆ ಮಾರಿಷಸ್ ಪ್ರಧಾನಿಯವರೊಂದಿಗೆ ಭಾರತದ ನೆರವಿನೊಂದಿಗೆ ಕೈಗೊಂಡಿರುವ ವಿವಿಧ ಯೋಜನೆಗಳಿಗೆ ಚಾಲನೆ ನೀಡಲಿದ್ದಾರೆ. ಈ ಯೋಜನೆಗಳಲ್ಲಿ ನಾಗರಿಕ ಸೇವಾ ಕಾಲೇಜು ಮತ್ತು ಪ್ರದೇಶ ಆರೋಗ್ಯ ಕೇಂದ್ರದ ಉದ್ಘಾಟನೆಯೂ ಸೇರಿದೆ. ಈ ಕುರಿತು ಮಾತನಾಡಿರುವ ಮಾರಿಷಸ್‌ನಲ್ಲಿರುವ ಭಾರತದ ಹೈಕಮಿಷನರ್ ಅನುರಾಗ್ ಶ್ರೀವಾಸ್ತವ, ಭಾರತ ಮತ್ತು ಮಾರಿಷಸ್ ಬಲವಾದ ಮತ್ತು ಕ್ರಿಯಾತ್ಮಕ ದ್ವಿಪಕ್ಷೀಯ ಸಂಬಂಧವನ್ನು ಹೊಂದಿವೆ ಮತ್ತು ಪ್ರಧಾನಿ ನರೇಂದ್ರ ಮೋದಿಯವರ ಭೇಟಿಯು ಎರಡೂ ದೇಶಗಳ ನಡುವಿನ ಬಲವಾದ ಬಾಂಧವ್ಯವನ್ನು ಪುನರುಚ್ಚರಿಸುತ್ತದೆ ಮತ್ತು ಈ ಸಂಬಂಧವನ್ನು ಹೊಸ ಎತ್ತರಕ್ಕೆ ಕೊಂಡೊಯ್ಯಲು ಸಹಾಯ ಮಾಡುತ್ತದೆ ಎಂದು ಹೇಳಿದ್ದಾರೆ.

**<><*<><>*><>**

೨ನೇ ಹಂತದ ಸಂಸತ್ತಿನ ಬಜೆಟ್ ಅಧಿವೇಶನ ಇಂದಿನಿಂದ ಆರಂಭವಾಗಿದೆ. ಏಪ್ರಿಲ್ ೪ರವರೆಗೆ ನಡೆಯಲಿರುವ ಈ ಹಂತದ ಅಧಿವೇಶನದಲ್ಲಿ ೨೦ ಬಾರಿ ಸದನ ಸಭೆ ಸೇರಲಿದೆ. ಇಂದು ಬೆಳಗ್ಗೆ ಕಲಾಪ ಆರಂಭವಾಗುತ್ತಿದ್ದಂತೆ ಪ್ರಶ್ನೋತ್ತರ ಕಲಾಪದ ವೇಳೆ ಡಿಎಂಕೆ ಸಂಸದೆ ಟಿ. ಸುಮತಿ ತಮಿಳುನಾಡಿಗೆ ಆಗಿರುವ ನಿಧಿ ಹಂಚಿಕೆ ಕುರಿತು ಪ್ರಶ್ನಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್, ಡಿಎಂಕೆ ತಮಿಳುನಾಡಿನ ವಿದ್ಯಾರ್ಥಿಗಳ ಅಭ್ಯುದಯ ಕುರಿತು ಬದ್ಧರಾಗಿಲ್ಲ. ಅವರ ಭವಿಷ್ಯಕ್ಕೆ ಕುತ್ತು ತರುತ್ತಿದ್ದಾರೆ ಎಂದರು. ಪಿಎಂ-ಶ್ರೀ ಯೋಜನೆ ಕುರಿತು ಸಚಿವ ಧರ್ಮೇಂದ್ರ ಪ್ರಧಾನ್ ನೀಡಿದಂತಹ ಹೇಳಿಕೆ ಕುರಿತಂತೆ ಡಿಎಂಕೆ ಹಾಗೂ ಕಾಂಗ್ರೆಸ್ ಸಂಸದರು ಅಸಮಾಧಾನ ವ್ಯಕ್ತಪಡಿಸಿದರು. ಬಳಿಕ ಅವರು, ಸದನದ ಬಾವಿಗಿಳಿದು ಪ್ರತಿಭಟನೆ ನಡೆಸಿದರು. ಲೋಕಸಭಾಧ್ಯಕ್ಷ ಓಂಬಿರ್ಲಾ ಹಲವು ಬಾರಿ ಸುಗಮ ಕಲಾಪ ನಡೆಸಲು ಅನುವು ಮಾಡಿಕೊಡಲು ಮನವಿ ಮಾಡಿದರೂ ಪ್ರತಿಭಟನೆ ಮುಂದುವರೆದ ಹಿನ್ನೆಲೆ ಸದನವನ್ನು ೧೨ ಗಂಟೆಯವರೆಗೆ ಮುಂದೂಡಲಾಯಿತು. ರಾಜ್ಯಸಭೆಯಲ್ಲಿ ಒಂದೇ ಸಂಖ್ಯೆಯ ಮತದಾರರ ಗುರುತು ಚೀಟಿ ನೀಡಿಕೆ ಹಾಗೂ ಇತರ ವಿಷಯಗಳನ್ನು ಕೈಗೆತ್ತಿಕೊಂಡು ಕಾಂಗ್ರೆಸ್, ಟಿಎಂಸಿ, ಡಿಎಂಕೆ, ಸಮಾಜವಾದಿ ಪಕ್ಷ ಮತ್ತಿತರು ಅಸಮಾಧಾನ ವ್ಯಕ್ತಪಡಿಸಿ ಸಭಾ ತ್ಯಾಗ ಮಾಡಿದರು. ಇದೇ ವೇಳೆ

ಸದನದ ನಾಯಕ ಜೆ.ಪಿ. ನಡ್ಡಾ, ಪ್ರತಿಪಕ್ಷಗಳು ಬೇಜವಾಬ್ದಾರಿಯುತ ವಿಧಾನವನ್ನು ಅನುಸರಿಸುತ್ತಿದೆ. ಹಾಗೂ ಯಾವುದೇ ವಿಷಯದ ಕುರಿತು ಚರ್ಚಿಸಲು ಸರ್ಕಾರ ಸಿದ್ಧವಿದೆ ಎಂದು ತಿಳಿಸಿದರು.

<><*<><>*><>

ಇದೇ ೧೬ ರಿಂದ ೫ ದಿನಗಳಿಗಾಗಿ ನ್ಯೂಜಿಲೆಂಡ್ ಪ್ರಧಾನಮಂತ್ರಿ ಕ್ರಿಸ್ಟೋಫರ್ ಲುಕ್ಸಾನ್ ಭಾರತಕ್ಕೆ ಭೇಟಿ ನೀಡಲಿದ್ದಾರೆ. ಈ ವೇಳೆ ಅವರೊಂದಿಗೆ ಸಚಿವರು, ಹಿರಿಯ ಅಧಿಕಾರಿಗಳು, ವ್ಯಾಪರೋದ್ಯಮಿಗಳು ಮಾಧ್ಯಮ ಪ್ರತಿನಿಧಿಗಳು ಹಾಗೂ ಭಾರತೀಯ ಸಮುದಾಯದ ಸದಸ್ಯರನ್ನೊಳಗೊಂಡ ಉನ್ನತ ಮಟ್ಟದ ನಿಯೋಗ ಆಗಮಿಸಲಿದೆ. ಈ ಕುರಿತು ಹೇಳಿಕೆ ಬಿಡುಗಡೆಗೊಳಿಸಿರುವ ವಿದೇಶಾಂಗ ವ್ಯವಹಾರಗಳ ಸಚಿವಾಲಯ, ತಮ್ಮ ಭೇಟಿಯ ವೇಳೆ ಕ್ರಿಸ್ಟೋಫರ್ ಲುಕ್ಸಾನ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಲಿದ್ದಾರೆ. ಈ ವೇಳೆ ಭಾರತ -ನ್ಯೂಜಿಲೆಂಡ್ ನಡುವಿನ ಸಂಬಂಧಗಳ ವಿವಿಧ ಅಂಶಗಳನ್ನೊಳಗೊಂಡ ಮಾತುಕತೆ ನಡೆಯಲಿದೆ ಎಂದು ತಿಳಿಸಿದೆ. ಪ್ರಧಾನಿ ಲಕ್ಸಾನ್ ಅವರು, ೧೦ನೇ ರೈಸಿನಾ ಸಂವಾದ ಕಾರ್ಯಕ್ರಮದ ಉದ್ಘಾಟನಾ ಅಧಿವೇಶನದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು, ಮುಖ್ಯ ಭಾಷಣ ಮಾಡಲಿದ್ದಾರೆ. ತಮ್ಮ ಭೇಟಿಯ ವೇಳೆ ಅವರು, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿಯಾಗಲಿದ್ದು, ಮುಂಬೈನಲ್ಲಿ ವಿವಿಧ ಉದ್ಯಮ ನಾಯಕರೊಂದಿಗೆ ಮಾತುಕತೆ ನಡೆಸಲಿದ್ದಾರೆ.

<><*<><>*><>

ಇಂದು ಕೇಂದ್ರ ಕೈಗಾರಿಕಾ ಭದ್ರತಾ ಪಡೆ - ಸಿ.ಐ.ಎಸ್.ಎಫ್ ೫೬ನೇ ಸ್ಥಾಪನಾ ದಿನ. ಅನೇಕ ನಾಯಕರು ಹಾಗೂ ಸಚಿವರು ರಾಷ್ಟ್ರಕ್ಕೆ ಸೇವೆ ಸಲ್ಲಿಸುವ ಸಿಐಎಸ್ಎಫ್ ಸೈನಿಕರ ಶೌರ್ಯ ಮತ್ತು ಕರ್ತವ್ಯ ಪ್ರಜ್ಞೆಗೆ ನಮನಗಳನ್ನು ತಿಳಿಸಿದ್ದಾರೆ. ತಮ್ಮ ಸಾಮಾಜಿಕ ಮಾಧ್ಯಮ ಖಾತೆಯಲ್ಲಿ ಸಂದೇಶ ಹಂಚಿಕೊಂಡಿರುವ ಕೇಂದ್ರ ಗೃಹ ಸಚಿವ ಅಮಿತ್ ಶಾ, ಎಲ್ಲ ಸಿಐಎಸ್ಎಫ್ ಸಿಬ್ಬಂದಿಗೆ ಸಂಸ್ಥಾಪನಾ ದಿನದ ಶುಭಾಶಯ ಕೋರಿದ್ದಾರೆ. ಸಿಐಎಸ್ಎಫ್ ಪಡೆ ದೇಶಭಕ್ತಿಯ ಅನುಕರಣೀಯ ಮಾನದಂಡಗಳನ್ನು ಸ್ಥಾಪಿಸಿದೆ. ನಮ್ಮ ಯೋಧರು ಧೈರ್ಯ ಹಾಗೂ ವೃತ್ತಿಪರತೆಯಿಂದ ಕಾರ್ಯನಿರ್ವಹಿಸಿ ದೇಶ ಹೆಮ್ಮೆ ಪಡುವಂತೆ ಮಾಡಿದ್ದಾರೆ ಎಂದು ಅವರು ತಿಳಿಸಿದ್ದಾರೆ.

<><*<><>*><>

ಗಂಗಾನದಿ ನೀರು ಶುದ್ಧವಾಗಿದ್ದು, ಕಲುಷಿತವಾಗಿಲ್ಲ ಎಂದು ಕೇಂದ್ರ ಜಲಶಕ್ತಿ ಸಚಿವ ಸಿ.ಆರ್. ಪಾಟೀಲ್ ಹೇಳಿದ್ದಾರೆ. ಸಂಸತ್ತಿನ ಹೊರಗೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗಂಗಾ ನದಿಯ ಶುದ್ಧತೆಯ ಕುರಿತು ತಪ್ಪು ತಿಳಿವಳಿಕೆ ಮೂಡಿಸಲು ಕೆಲವರು ಪ್ರಯತ್ನಿಸುತ್ತಿದ್ದಾರೆ ಎಂದು ಹೇಳಿದ್ದಾರೆ.

**ಧ್ವನಿ : ಸಿ.ಆರ್. ಪಾಟೀಲ್ (೧೬ ಸೆಕೆಂಡ್‌ಗಳು)**

ಮಹಾಕುಂಭಮೇಳದ ಸಮಯದಲ್ಲಿ ಹಲವು ನಾಯಕರು ಗಂಗಾನದಿ ನೀರು ಮಾಲಿನ್ಯಗೊಂಡಿದೆ ಎಂದು ಕಳವಳವ್ಯಕ್ತಪಡಿಸಿದ ಬೆನ್ನಲ್ಲೆ ಸಿ.ಆರ್. ಪಾಟೀಲ್ ಸ್ಪಷ್ಟನೆ ನೀಡಿದ್ದಾರೆ.

**<><*<><>*><>**

ರಷ್ಯಾ ಹಾಗೂ ಉಕ್ರೇನ್ ನಡುವಿನ ಮೂರು ವರ್ಷಗಳಿಂದ ನಡೆಯುತ್ತಿರುವ ಸಂಘರ್ಷಕ್ಕೆ ಪರಿಹಾರ ಒದಗಿಸಲು ಸೌದಿ ಅರೇಬಿಯಾದ ಜೆದ್ದಾದಲ್ಲಿ ನಾಳೆ ಅಮೆರಿಕ ಹಾಗೂ ಉಕ್ರೇನ್ ಮಾತುಕತೆ ನಡೆಸಲಿದೆ. ಉಕ್ರೇನ್ ಅಧ್ಯಕ್ಷ ವೊಲೊದಿಮಿರ್ ಝೆಲೆನ್ಸ್ಕಿ ಕಳೆದ ಫೆಬ್ರವರಿ ೨೮ ರಂದು ವಾಷಿಂಗ್‌ಟನ್‌ನ ಶ್ವೇತಭವನಕ್ಕೆ ಭೇಟಿ ನೀಡಿದ್ದ ವೇಳೆ ಅವರು ಹಾಗೂ ಅಧ್ಯಕ್ಷ ಟ್ರಂಪ್ ನಡುವಿನ ವಾದ-ವಿವಾದಗಳ ನಂತರ ನಡೆಯುತ್ತಿರುವ ಸಭೆ ಇದಾಗಿದೆ. ಇಂದು ಅಧ್ಯಕ್ಷ ಝೆಲೆನ್ಸ್ಕಿ ಸೌದಿ ರಾಜಕುಮಾರ ಮೊಹಮ್ಮದ್ ಬಿನ್ ಸಲ್ಮಾನ್ ಅವರನ್ನು ಭೇಟಿಯಾಗಲಿದ್ದಾರೆ. ನಿನ್ನೆ ಅವರು, ಸಂಘರ್ಷ ಕುರಿತಂತೆ ರಚನಾತ್ಮಕ ಸಂವಾದಕ್ಕೆ ಉಕ್ರೇನ್ ಬದ್ಧವಾಗಿದ್ದು, ಅಮೆರಿಕ ತಂಡದೊಂದಿಗೆ ನಿರಂತರ ಸಂಪರ್ಕದಲ್ಲಿದೆ ಎಂದರು. ಅಮೆರಿಕದ ಮಧ್ಯಪ್ರಾಚ್ಯ ರಾಯಭಾರಿ ಸ್ಟೀವ್ ವಿಟ್‌ಕಾಫ್, ಅಮೆರಿಕ ಶಾಂತಿ ಒಪ್ಪಂದ ಹಾಗೂ ಕದನ ವಿರಾಮಕ್ಕಾಗಿ ಒಂದು ಚೌಕಟ್ಟು ರೂಪಿಸಲು ಬಯಸುತ್ತದೆ ಎಂದು ತಿಳಿಸಿದ್ದಾರೆ. ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೋ ರೂಬಿಯೊ, ಇಂದು ಜೆದ್ದಾಗೆ ತೆರಳಲಿದ್ದಾರೆ ಎಂದು ಅಮೆರಿಕ ವಿದೇಶಾಂಗ ಇಲಾಖೆ ತಿಳಿಸಿದೆ. ಉಕ್ರೇನ್‌ನ ಬಿಕ್ಕಟ್ಟನ್ನು ಕೊನೆಗೊಳಿಸಲು ಹಾಗೂ ಶಾಂತಿ ಸ್ಥಾಪಿಸಲು ತಮ್ಮ ಸಹಕಾರವಿರಲಿದೆ ಎಂದು ಸೌದಿ ಅರೇಬಿಯಾ ವಿದೇಶಾಂಗ ಸಚಿವಾಲಯ ತಿಳಿಸಿದೆ.

**<><*<><>*><>**

ವನುಆತು ಪೌರತ್ವ ಆಯೋಗ ಈ ಹಿಂದೆ ಇಂಡಿಯನ್ ಪ್ರೀಮಿಯರ್ ಲೀಗ್‌ನ ಮಾಜಿ ಮುಖ್ಯಸ್ಥ ಲಲಿತ್ ಮೋದಿಗೆ ನೀಡಿದ್ದ ಪಾಸ್‌ಪೋರ್ಟ್ ಅನ್ನು ರದ್ದುಗೊಳಿಸುವಂತೆ ವನುವಾತು ಪ್ರಧಾನಿ ಜಾತನ್ ನಾಪಟ್, ಪೌರತ್ವ ಆಯೋಗಕ್ಕೆ ಆದೇಶಿಸಿದ್ದಾರೆ. ವನುಆತು ಪೌರತ್ವ ಪಡೆಯುವುದು

ಒಂದು ಸವಲತ್ತೇ ಹೊರತು ಹಕ್ಕಲ್ಲ ಎಂದು ಅವರು ಹೇಳಿದ್ದಾರೆ. ಲಲಿತ್ ಮೋದಿ ಅವರು, ದಕ್ಷಿಣ ಪೆಸಿಫಿಕ್‌ನಲ್ಲಿರುವ ಸಣ್ಣ ದ್ವೀಪ ರಾಷ್ಟ್ರವಾದ ವನುಆತುವಿನ ಪೌರತ್ವ ಪಡೆದಿದ್ದಾರೆ ಎಂಬ ಮಾಧ್ಯಮ ವರದಿಗಳ ಬೆನ್ನಲ್ಲೇ ಈ ನಿರ್ಧಾರ ಕೈಗೊಳ್ಳಲಾಗಿದೆ. ಕಳೆದ ಶುಕ್ರವಾರ ಲಲಿತ್ ಮೋದಿ ಲಂಡನ್‌ನಲ್ಲಿರುವ ಭಾರತೀಯ ಹೈಕಮಿಷನ್‌ನಲ್ಲಿ ತಮ್ಮ ಭಾರತೀಯ ಪಾಸ್‌ಪೋರ್ಟ್‌ಅನ್ನು ಹಿಂದಿರುಗಿಸಲು ಅರ್ಜಿ ಸಲ್ಲಿಸಿದ್ದರು ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಈ ವಿನಂತಿಯನ್ನು ಅಸ್ತಿತ್ವದಲ್ಲಿರುವ ನಿಯಮಗಳು ಹಾಗೂ ಕಾರ್ಯ ವಿಧಾನಗಳ ಪ್ರಕಾರ ಪರಿಶೀಲಿಸಲಾಗುವುದು ಎಂದು ವಿದೇಶಾಂಗ ವಕ್ತಾರ ರಣಧೀರ್ ಜೈಸ್ವಾಲ್ ತಿಳಿಸಿದ್ದಾರೆ. ಭಾರತ ಲಲಿತ್ ಮೋದಿ ಅವರ ವಿರುದ್ಧ ಕಾನೂನಿನ ಪ್ರಕಾರ ಕ್ರಮ ವಹಿಸುವುದನ್ನು ಮುಂದುವರೆಸಲಿದೆ ಎಂದಿದ್ದಾರೆ. ಐಪಿಎಲ್‌ನ ಮುಖ್ಯಸ್ಥರಾಗಿದ್ದ ವೇಳೆ ಲಲಿತ್ ಮೋದಿ ಕೋಟ್ಯಾಂತರ ರೂಪಾಯಿ ದುರುಪಯೋಗ ಪಡಿಸಿಕೊಂಡ ಆರೋಪ ಹೊತ್ತಿದ್ದಾರೆ. ೨೦೧೦ರಿಂದ ಅವರು, ಭಾರತವನ್ನು ತೊರೆದು ಲಂಡನ್‌ನಲ್ಲಿ ವಾಸಿಸುತ್ತಿದ್ದಾರೆ.

<><*<><>*><>

ದೇಶೀಯ ಉದ್ಯಮಗಳನ್ನು ರಕ್ಷಿಸುವ ನಿಟ್ಟಿನಲ್ಲಿ ಭಾರತ ಸರ್ಕಾರ ಕ್ರಮಕೈಗೊಂಡಿದ್ದು, ಚೀನಾ ಮತ್ತು ಜಪಾನ್‌ನಿಂದ ಆಮದು ಮಾಡಿಕೊಳ್ಳುವ ನೀರು ಸಂಸ್ಕರಣೆಗೆ ಬಳಸುವ ರಾಸಾಯನಿಕದ ಮೇಲೆ ಐದು ವರ್ಷಗಳ ಕಾಲ ಪ್ರತಿ ಟನ್‌ಗೆ ೯೮೬ ಅಮೆರಿಕ ಡಾಲರ್‌ಗಳ ಡಂಪಿಂಗ್ ವಿರೋಧಿ ಸುಂಕವನ್ನು ವಿಧಿಸಿದೆ ಎಂದು ಹಣಕಾಸು ಸಚಿವಾಲಯದ ಅಧಿಸೂಚನೆ ತಿಳಿಸಿದೆ. 'ಟ್ರೈಕ್ಲೋರೋ ಐಸೋಸೈನೂರಿಕ್ ಆಸಿಡ್‌ನ ಮೇಲೆ ಸುಂಕ ವಿಧಿಸಲು ವಾಣಿಜ್ಯ ಸಚಿವಾಲಯದಡಿ ಕಾರ್ಯನಿರ್ವಹಿಸುವ ತನಿಖಾ ವಿಭಾಗವಾದ ವಾಣಿಜ್ಯ ಪರಿಹಾರಗಳ ಮಹಾ ನಿರ್ದೇಶನಾಲಯದ ಶಿಫಾರಸುಗಳನ್ನು ಅನುಸರಿಸಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ನ್ಯಾಯಯುತ ವ್ಯಾಪಾರವನ್ನು ಖಚಿತಪಡಿಸಿಕೊಳ್ಳಲು ಮತ್ತು ದೇಶೀಯ ಉದ್ಯಮಕ್ಕೆ ಸಮಾನ ಅವಕಾಶಗಳನ್ನು ಒದಗಿಸಲು ಡಂಪಿಂಗ್ ವಿರೋಧಿ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ ಎಂದು ಸಚಿವಾಲಯ ತಿಳಿಸಿದೆ.

<><*<><>*><>

ಮುಂಬೈನ ಬ್ರಬಾರ್ನ್ ಕ್ರೀಡಾಂಗಣದಲ್ಲಿ ಇಂದು ಸಂಜೆ ನಡೆಯಲಿರುವ ಮಹಿಳಾ ಪ್ರೀಮಿಯರ್ ಲೀಗ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ಹಾಗೂ ಗುಜರಾತ್ ಜೈಂಟ್ಸ್ ತಂಡಗಳು ಮುಖಾಮುಖಿಯಾಗಲಿವೆ. ಉಭಯ ತಂಡಗಳು ಈಗಾಗಲೇ ದೆಹಲಿ ತಂಡದೊಂದಿಗೆ

ಪ್ಲೇಆಫ್ ಹಂತದಲ್ಲಿ ಸ್ಥಾನ ಖಚಿತಪಡಿಸಿಕೊಂಡಿವೆ. ಅಂಕಪಟ್ಟಿಯಲ್ಲಿ ಮೊದಲನೇ ಸ್ಥಾನಗಳಿಸುವ ತಂಡ ಫೈನಲ್‌ಗೆ ನೇರವಾಗಿ ಅರ್ಹತೆ ಪಡೆಯಲಿರುವ ಹಿನ್ನಲೆ ಈ ಪಂದ್ಯ ಮಹತ್ವ ಪಡೆದಿದೆ. ಗುಂಪು ಹಂತದ ಕೊನೆಯಲ್ಲಿ ಅಂಕಪಟ್ಟಿಯಲ್ಲಿ ೨ನೇ ಹಾಗೂ ೩ನೇ ಸ್ಥಾನ ಪಡೆಯುವ ತಂಡಗಳು ಎಲಿಮಿನೇಟರ್ ಪಂದ್ಯದಲ್ಲಿ ಮುಖಾಮುಖಿಯಾಗಲಿದ್ದು, ಈ ಪಂದ್ಯದಲ್ಲಿ ಗೆಲುವು ಸಾಧಿಸುವ ತಂಡ ಫೈನಲ್‌ಗೆ ಪ್ರವೇಶ ಪಡೆಯಲಿದೆ. ಪ್ರಸ್ತುತ ದೆಹಲಿ ಕ್ಯಾಪಿಟಲ್ಸ್ ತಂಡ ೧೦ ಅಂಕಗಳೊಂದಿಗೆ ಮೊದಲನೇ ಸ್ಥಾನದಲ್ಲಿದೆ. ಗುಜರಾತ್ ಹಾಗೂ ಮುಂಬೈ ತಂಡಗಳು ತಲಾ ೮ ಅಂಕ ಪಡೆದಿದ್ದರೂ, ಉತ್ತಮ ನೆಟ್ ರನ್‌ರೇಟ್ ಕಾಯ್ದುಕೊಂಡಿರುವುದು ಗುಜರಾತ್ ೨ನೇ ಸ್ಥಾನದಲ್ಲಿದೆ. ಹಾಲಿ ಚಾಂಪಿಯನ್ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಯುಪಿ ವಾರಿಯರ್ಸ್ ತಂಡಗಳು ಈಗಾಗಲೇ ಟೂರ್ನಿಯಿಂದ ಹೊರಬಿದ್ದಿದೆ.

**<><*<><>*><>**

ಇಂಡಿಯನ್ ಸೂಪರ್ ಲೀಗ್‌ನಲ್ಲಿಂದು ಕೋಲ್ಕತ್ತಾದ ಕಿಶೋರ್ ಭಾರತಿ ಕ್ರಿರಂಗನ್ ಕ್ರೀಡಾಂಗಣದಲ್ಲಿ ಪಂಜಾಬ್ ಫುಟ್ಬಾಲ್ ಕ್ಲಬ್ ಮತ್ತು ಮೊಹಮ್ಮದನ್ ಎಸ್‌ಸಿ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯವು ಸಂಜೆ ೭.೩೦ಕ್ಕೆ ಪ್ರಾರಂಭವಾಗಲಿದೆ.

**<><*<><>*><>**

ದೆಹಲಿಯ ಜವಹರ್‌ಲಾಲ್ ನೆಹರು ಕ್ರೀಡಾಂಗಣದಲ್ಲಿ ನಾಳೆಯಿಂದ ನಡೆಯಲಿರುವ 'ವಿಶ್ವ ಪ್ಯಾರಾ ಅಥ್ಲೆಟಿಕ್ಸ್ ಗ್ರ್ಯಾನ್ ಫಿಕ್ಸ್-೨೦೨೫' ಕ್ರೀಡಾಕೂಟದಲ್ಲಿ ಭಾರತದ ೧೪೫ ಅಥ್ಲೀಟ್‌ಗಳು ಭಾಗವಹಿಸಲಿದ್ದಾರೆ. ೧೯ ದೇಶಗಳ ಪ್ಯಾರಾ ಅಥ್ಲೀಟ್‌ಗಳು ಭಾಗವಹಿಸುತ್ತಿದ್ದಾರೆ. ಸೌದಿ ಅರೇಬಿಯಾ, ಜರ್ಮನಿ, ಕಜಕಿಸ್ತಾನ್, ಉಜ್ಬೇಕಿಸ್ತಾನ್, ಪಿಲಿಫೈನ್ಸ್, ಜಪಾನ್, ಆಸ್ಟ್ರೇಲಿಯಾ, ಬ್ರೆಜಿಲ್, ನೇಪಾಳ, ಭೂತಾನ್ ಮತ್ತು ಶ್ರೀಲಂಕಾದ ಕ್ರೀಡಾಪಟುಗಳು ಈಗಾಗಲೇ ದೆಹಲಿ ಕ್ರೀಡಾಂಗಣದಲ್ಲಿ ತಾಲೀಮು ನಡೆಸುತ್ತಿದ್ದಾರೆ. ಮೂರು ದಿನಗಳ ಕ್ರೀಡಾಕೂಟದಲ್ಲಿ ೯೦ ಕ್ಕೂ ಅಧಿಕ ಕ್ರೀಡಾ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ.